ಕರ್ನಾಟಕ ಸರ್ಕಾರ
ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು
primarydpi@gmail.com 080-22246975

ಸಂಖ್ಯೆ: ಎಡಿಎಂ-2(4)/ಶಾ.ಪ್ರಾ.03(2)/2020-21 ದಿನಾಂಕ-18-03-2021

## ಸುತ್ತೋಲೆ

ವಿಷಯ:- 2020-21 ನೇ ಸಾಲಿನಲ್ಲಿ ಎಲ್ಲಾ ವರ್ಗದ ಶಾಲೆಗಳಲ್ಲಿ ವಿದ್ಯಾರ್ಥಿಗಳನ್ನು ಪೂರ್ಣ ಪ್ರಮಾಣದಲ್ಲಿ ದಾಖಲಾತಿ ಮಾಡಿಕೊಳ್ಳುವ ಬಗ್ಗೆ.

ಉಲ್ಲೇಖ:-
1. ಈ ಕಛೇರಿ ಸುತ್ತೋಲೆ ಸಂಖ್ಯೆ: ಎಡಿಎಂ-2(4) ಮ.ಶಿ.ಹ-22/2020-21 ದಿನಾಂಕ.08-01-2021.
2. ಈ ಕಛೇರಿ ಸುತ್ತೋಲೆ ಸಂಖ್ಯೆ: ಸಿ4(6) ಸಪ್ರೌಶಾ/ಶಾ.ಕಾ.ಪ್ರ-47/2020-21 ದಿನಾಂಕ.19-02-2021.
3. ಈ ಕಛೇರಿ ಸುತ್ತೋಲೆ ಸಂಖ್ಯೆ. ಸಿ7(2)ಪ್ರಾಶಿಅ:ಶುಲ್ಕ:30/2020-21 ದಿನಾಂಕ 19-02-2021
4. ಈ ಕಛೇರಿ ಸುತ್ತೋಲೆ ಎಡಿಎಂ-2(4)/ಶಾ.ಪ್ರಾ.03/2020-21 ದಿ.26-02-2021

********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಕೋವಿಡ್-19 ವೈರಾಣು ದೇಶದಾದ್ಯಂತ ವ್ಯಾಪಕವಾಗಿ ಹರಡಿದ ಹಿನ್ನಲೆಯಲ್ಲಿ ಶಾಲಾ ಶೈಕ್ಷಣಿಕ ಚಟುವಟಿಕೆಗಳನ್ನು ನಿಗದಿಗೊಳಿಸಿದ ಕಾರ್ಯಸೂಚಿಯಂತೆ ಪೂರ್ಣ ಪ್ರಮಾಣದಲ್ಲಿ ಅನುಷ್ಠಾನಗೊಳಿಸವ ಸಲುವಾಗಿ ಉಲ್ಲೇಖ-1 ರಂತೆ 6 ರಿಂದ 14 ವರ್ಷ ವಯೋಮಿತಿಯ ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಗುರುತಿಸಿ 1 ರಿಂದ 8 ನೇ ತರಗತಿಗೆ ವಯೋಮಾನ ಮತ್ತು ಕಲಿಕಾ ಸಾಮರ್ಥ್ಯಕ್ಕೆ ಅನುಗುಣವಾಗಿ ಪ್ರವೇಶ ನೀಡಿ ಈ ಮಕ್ಕಳಿಗೆ ಶಾಲೆಗೆ ದಾಖಲು ಮಾಡಿ, ನಂತರ ವಿದ್ಯಾವಿಕಾಸ ಯೋಜನೆಯ ಪ್ರೋತ್ಸಾಹದಾಯಕ ಯೋಜನೆಗಳನ್ನು ಒದಗಿಸಲು ಸೂಚಿಸಲಾಗಿದೆ.

ಉಲ್ಲೆಖ-2 ರಂತೆ ರಾಜ್ಯದಲ್ಲಿನ ಸರ್ಕಾರಿ, ಅನುದಾನ ಮತ್ತು ಅನುದಾನರಹಿತ ಶಾಲೆಗಳಲ್ಲಿನ 6 ರಿಂದ 8ನೇ ತರಗತಿ ವಿದ್ಯಾರ್ಥಿಗಳಿಗೆ ಪೂರ್ಣಾವಧಿ ಶಾಲೆಯನ್ನು ನಡೆಸಲು ಹಾಗೂ ಬೆಂಗಳೂರು ನಗರದ ಬಿ.ಬಿ.ಎಂ.ಪಿ ವ್ಯಾಪ್ತಿ ಮತ್ತು ಕೇರಳ ರಾಜ್ಯದ ಗಡಿಭಾಗದ ಪ್ರದೇಶಗಳಲ್ಲಿ 8ನೇ ತರಗತಿ ಪೂರ್ಣಾವಧಿ ಶಾಲೆ ಪ್ರಾರಂಭ ಹಾಗೂ 6 ಮತ್ತು 7ನೇ ತರಗತಿಗಳು ವಿದ್ಯಾಗಮ ಕಾರ್ಯಕ್ರಮ ಮುಂದುವರಿಸುವಂತೆ ತಿಳಿಸಲಾಗಿದೆ.

ಉಲ್ಲೇಖ-3 ರಂತೆ ರಾಜ್ಯದ ಶಾಲೆಗಳಲ್ಲಿ ಕೋವಿಡ್-19 ಹಿನ್ನಲೆಯಲ್ಲಿ ಪ್ರಸ್ತುತ 2020-21ನೇ ಶೈಕ್ಷಣಿಕ ಸಾಲಿನಲ್ಲಿ ಇದುವರೆವಿಗೂ ಶಾಲೆಗಳಿಗೆ ಪೂರ್ಣ ಪ್ರಮಾಣದಲ್ಲಿ ವಿದ್ಯಾರ್ಥಿಗಳು ದಾಖಲಾತಿಯಾಗಿಲ್ಲದ ಕಾರಣ ಮುಂದಿನ ಶೈಕ್ಷಣಿಕ ಅವಧಿಗಳ ವ್ಯಾಸಂಗಕ್ಕೆ ಅಡಚಣೆ ಉಂಟಾಗುತ್ತದೆ ಪ್ರಯುಕ್ತ ದಿನಾಂಕ 30-03-2021 ರವರಗೆ ಶಾಲಾ ಪ್ರವೇಶ ದಾಖಲಾತಿ ಅವಧಿಯನ್ನು ವಿಸ್ತರಣೆ ಮಾಡಲಾಗಿದೆ.

ಉಲ್ಲೇಖ-4 ರಂತೆ ಅಂಗನವಾಡಿ ಮಕ್ಕಳ ದಾಖಲಾತಿ ವಿವರಗಳನ್ನು ಪಡೆದು 2020-21ನೇ ಸಾಲಿನಲ್ಲಿ ಈ ಎಲ್ಲಾ ಮಕ್ಕಳನ್ನು & ಪ್ರತ್ಯೇಕವಾಗಿ ಅಂಗನವಾಡಿಗಳಿಂದ ಹೊರಗುಳಿದ ಮಕ್ಕಳು ಹಾಗೂ ಮನೆ ಮನೆ ಸಮೀಕ್ಷೆಯಲ್ಲಿ ಗುರುತಿಸಿದ ಶಾಲಾ ದಾಖಲಾತಿಗೆ ಅರ್ಹ ವಯೋಮಾನದ ಮಕ್ಕಳನ್ನು ಶಾಲಾ ಮುಖ್ಯವಾಹಿನಿಗೆ ತರಲು ಎಲ್ಲಾ ಅಗತ್ಯ ಕ್ರಮ ವಹಿಸಲು ಸೂಚಿಸಲಾಗಿದೆ.

ಕೋವಿಡ್-19 ವೈರಾಣು ಹರಡಿದ ಹಿನ್ನಲೆಯಲ್ಲಿ ಶಾಲಾ ಶೈಕ್ಷಣಿಕ ಚಟುವಟಿಕೆಗಳನ್ನು ನಿಗದಿಗೊಳಿಸಿದ ಕಾರ್ಯಸೂಚಿಯಂತೆ ಪೂರ್ಣ ಪ್ರಮಾಣದಲ್ಲಿ ಅನುಷ್ಠಾನಗೊಳಿಸುವ ಸಲುವಾಗಿ ಮತ್ತು ಮಕ್ಕಳು ಶಿಕ್ಷಣದಿಂದ ವಂಚಿತರಾಗಬಾರದೆಂದು ಶಾಲೆಗೆ ದಾಖಲಾಗಿರುವ ಎಲ್ಲಾ ಮಕ್ಕಳಿಗೆ ಪ್ರತಿ ವರ್ಷದಂತೆ ವಿದ್ಯಾವಿಕಾಸ ಯೋಜನೆಯಡಿಯಲ್ಲಿ ಉಚಿತವಾಗಿ ವಿವಿಧ ಪ್ರೋತ್ಸಾಹದಾಯಕ ಯೋಜನೆಗಳಾದ ಸಮವಸ್ತ್ರ & ಪಠ್ಯಪುಸ್ತಕ ವಿತರಿಸಲಾಗಿರುತ್ತದೆ ಹಾಗೂ ಪಠ್ಯ ಪುಸ್ತಕಗಳನ್ನು ವೆಬ್ ಸೈಟ್ ನಲ್ಲಿ ಪ್ರಕಟಿಸಲಾಗಿರುತ್ತದೆ. ಕೋವಿಡ್-19 ಹಿನ್ನಲೆಯಲ್ಲಿ ಮದ್ಯಾಹ್ನದ ಬಿಸಿಯೂಟದ ಬದಲಿಗೆ ಆಹಾರ ಧಾನ್ಯಗಳನ್ನು ಮನೆಗೆ ಒಯ್ಯಲು ವಿತರಿಸಲಾಗುತ್ತಿದೆ.

ಒಟ್ಟಾರೆ ಮಕ್ಕಳು ಶೈಕ್ಷಣಿಕ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಲು ಅನುವಾಗುವಂತೆ ನೇರ ಶಿಕ್ಷಣ, ವಿದ್ಯಾಗಮ, ಬಾನುಲಿ, ಚಂದನ ದೂರದರ್ಶನ ಆನ್ ಲೈನ್, ಯು-ಟ್ಯೂಬ್, ಮುಖಾಂತರ ಬೋಧಿಸಲಾಗುತ್ತಿದೆ. ಎಸ್.ಎಸ್.ಎಲ್.ಸಿ ವಿದ್ಯಾರ್ಥಿಗಳಿಗೆ ಈ ಸಾಲಿನ ಪರೀಕ್ಷೆಗೆ ನೋಂದಾಯಿಸಲು ದಿನಾಂಕವನ್ನು ವಿಸ್ತರಿಸಲಾಗಿರುತ್ತದೆ ಹಾಗೂ ಪರಿಕ್ಷೆಯನ್ನು ಜೂನ್-2021ನೇ ತಿಂಗಳಲ್ಲಿ ಹಮ್ಮಿಕೊಳ್ಳಲಾಗಿರುತ್ತದೆ ಆರ್.ಟಿ.ಇ ಅಡಿ ದಾಖಲಾಗಿರುವ ಮಕ್ಕಳ ಶುಲ್ಕವನ್ನು ಮರುಪಾವತಿಸಲು ಕ್ರಮ ವಹಿಸಲಾಗುತ್ತಿದೆ ಮತ್ತು ಶಾಲಾ ಮಕ್ಕಳಿಗೆ ಸಾರಿಗೆ ಇಲಾಖೆಯ ಸಹಕಾರದೊಂದಿಗೆ ಸಾರಿಗೆ ವ್ಯವಸ್ಥೆಯನ್ನು ಕಲ್ಪಿಸಲಾಗಿದೆ. ಎಸ್.ಎಸ್.ಎಲ್.ಸಿ ವಿದ್ಯಾರ್ಥಿಗಳಿಗ ಜ್ಞಾನದೀವಿಗೆ ಕಾರ್ಯಕ್ರಮದ ಮೂಲಕ ಸಮುದಾಯದ ನೆರವಿನಿಂದ ಲ್ಯಾಪ್ ಟಾಪ್ ನೀಡಲಾಗುತ್ತಿದೆ

6-10 ನೇ ತರಗತಿಯ ವಿದ್ಯಾರ್ಥಿಗಳಿಗೆ ಪೂರ್ಣಪ್ರಮಾಣದ ತರಗತಿಗಳನ್ನು ಪ್ರಾರಂಭಿಸಲಾಗಿರುತ್ತದೆ. 5 ನೇ ತರಗತಿಗೆ ದೂರದರ್ಶನ ಮೂಲಕ ಇ-ಸಂವೇದ ಕಾರ್ಯಕ್ರಮವ ಮೂಲಕ ಶೈಕ್ಷಣಿಕ ಮಾರ್ಗದರ್ಶನ ನೀಡಲಾಗುತ್ತಿದೆ. 1-4 ನೇ ತರಗತಿಯವರೆಗೆ ಬಾನುಲಿ ಮುಖಾಂತರ ತರಗತಿಗಳನ್ನು ಹಮ್ಮಿಕೊಂಡು ಮಕ್ಕಳನ್ನು ನಿರಂತರ ಕಲಿಕೆಯಲ್ಲಿ ತೊಡಗಿಸಿಕೊಳ್ಳಲಾಗಿರುತ್ತದೆ

**ಆದಾಗ್ಯೂ ನಿರೀಕ್ಷಿತ ಮಟ್ಟದಲ್ಲಿ ವಿದ್ಯಾರ್ಥಿಗಳು ದಾಖಲಾತಿಯಾಗದಿರುವುದನ್ನು ಗಮನಿಸಲಾಗಿದೆ. ಅದರಂತೆ :-**

ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ) ಮತ್ತು ಉಪನಿರ್ದೇಶಕರು (ಅಭಿವೃದ್ಧಿ) ಇವರು ತಮ್ಮ ವ್ಯಾಪ್ತಿಯಲ್ಲಿರುವ ಡಯಟ್ ಹಿರಿಯ ಉಪನ್ಯಾಕರು, ಉಪನ್ಯಾಸಕರು, ಶಿಕ್ಷಣಾಧಿಕಾರಿಗಳು ವಿಷಯ ಪರಿವೀಕ್ಷಕರು, ಜಿಲ್ಲಾ ಉಪಯೋಜನಾ ಸಮನ್ವಯಾಧಿಕಾರಿಗಳು. ಕ್ಷೇತ್ರ ಶಿಕ್ಷಣಾಧಿಕಾರಿಗಳು, ಕ್ಷೇತ್ರ ಸಮಪನ್ಮೂಲಾಧಿಕಾರಿಗಳು, ಬಿಸಿಯೂಟದ ಅಧಿಕಾರಿಗಳು ಇ.ಸಿ.ಓ, ಬಿ.ಆರ್.ಪಿ ಸಿ.ಆರ್.ಪಿ ಗಳನ್ನು ಒಳಗೊಂಡಂತೆ ಪ್ರತಿ ಹೋಬಳಿ ಮಟ್ಟದಲ್ಲಿ ತಂಡ ರಚಿಸುವುದು. ಈ ತಂಡವು ಸರ್ಕಾರಿ, ಅನುದಾನಿತ ಅನುದಾನರಹಿತ ಶಾಲೆಗಳಲ್ಲಿ ವಿದ್ಯಾರ್ಥಿಗಳನ್ನು ಪೂರ್ಣ ಪ್ರಮಾಣದಲ್ಲಿ ದಾಖಲಾತಿ ಮಾಡಲು ಎಲ್ಲಾ ಅಗತ್ಯ ಕ್ರಮ ಕೈಗೊಳ್ಳುವುದು.

ಪ್ರತಿ ತಂಡ ನಿಗಧಿತ ಹೋಬಳಿಯ ಎಲ್ಲಾ ವರ್ಗದ 2019-20 ನೇ ಸಾಲಿನಲ್ಲಿನ ಅಂಗನವಾಡಿ/ ಪೂರ್ವಪ್ರಾಥಮಿಕ/ಬಾಲವಾಡಿ ಹಾಗೂ ಎಲ್.ಕೆ.ಜಿ ಯಿಂದ 10ನೇ ತರಗತಿವರಗಿನ ಎಲ್ಲಾ ಅರ್ಹ ಮಕ್ಕಳ ದಾಖಲಾತಿ ಪಡೆದು ಎಲ್ಲಾ ವಿದ್ಯಾರ್ಥಿಗಳು ಕಡ್ಡಾಯವಾಗಿ ಶಾಲೆಗೆ ದಾಖಲಾಗಿರುವ ಬಗ್ಗೆ ಖಾತ್ರಿಪಡಿಸಿಕೊಳ್ಳುವುದು.

2019-20ನೇ ಸಾಲಿನಲ್ಲಿ ವ್ಯಾಸಂಗ ಮಾಡುತ್ತಿದ್ದ ಯಾವುದಾದರು ವಿದ್ಯಾರ್ಥಿ ಶಾಲೆಯಿಂದ ಹೊರಗುಳಿದಿದ್ದಲ್ಲಿ ಅಂತಹ ಮಕ್ಕಳನ್ನು ಗುರುತಿಸಿ ಶಾಲಾ ಮುಖ್ಯಾಪಹಿನಿಗೆ ತರಲು ಸೂಚಿಸಲಾಗಿದೆ. ಒಂದು ವೇಳೆ ತಾಲ್ಲುಕು ಬಿಟ್ಟು ಹೋದಲ್ಲಿ ಇವರ ಖುಖಿಖ ನಲ್ಲಿ ನೊಂದಾಯಿಸಿರುವ ಮೋಬೈಲ್ ಸಂಖ್ಯೆ ಮೂಲಕ ಪೋಷಕರನ್ನು ಸಂಪರ್ಕಿಸಿ ಮನವೊಲಿಸಿ ವಿದ್ಯಾರ್ಥಿಗಳನ್ನು ಅವರ ವಾಸಸ್ಥಳದ ಸಮೀಪದ ಯಾವುದಾದರೂ ಶಾಲೆಗೆ ದಾಖಲು ಮಾಡಿ ಮಕ್ಕಳನ್ನು ಶಾಲಾ ಮುಖ್ಯಾಪಹಿನಿಗೆ ತರಲು ಸೂಚಸಿದೆ.

6 ರಿಂದ 10 ನೇ ತರಗತಿಯ ವಿದ್ಯಾರ್ಥಿಗಳಿಗೆ ಪೂರ್ಣ ಪ್ರಮಾಣದಲ್ಲಿ ತರಗತಿಗಳು ಆರಂಭಗೊಂಡಿರುವುದರಿಂದ ನಿಗಧಿತ ಪ್ರಮಾಣದ ದಾಖಲಾತಿ ಹಾಜರಾತಿಯನ್ನು ಖಚಿತಪಡಿಸುವುದು.

ದಿನಾಂಕ 29-03-2021 ರಂದು ಮಾನ್ಯ ಉಚ್ಚನ್ಯಾಯಾಲಯದಲ್ಲಿ ಜಿಲ್ಲಾವಾರು ಅಂಕಿ ಅಂಶಗಳ ಬಗ್ಗೆ ವರದಿ ಮಾಡಬೇಕಾಗಿದ್ದು ಉಪನಿರ್ದೇಶಕರು (ಆಡಳಿತ) ಮತ್ತು ಉಪನಿರ್ದೇಶಕರು (ಅಭಿವೃದ್ಧಿ) ಪ್ರತ್ಯೇಕವಾಗಿ Excel Sheet ನಲ್ಲಿ & PDF primarydpi@gmail.comಗೆ / SATS ನಲ್ಲಿ update ಮಾಡಿ ಕಳುಹಿಸಲು ಸೂಚಿಸಿದೆ.

ಸುತ್ತೋಲೆಯಲ್ಲಿರುವ ಎಲ್ಲಾ ಅಂಶಗಳನ್ನು ಗಮನದಲ್ಲಿರಿಸಿಕೊಂಡು ರಾಜ್ಯದಲ್ಲಿನ ಎಲ್ಲಾ ಸರ್ಕಾರಿ, ಅನುದಾನಿತ ಮತ್ತು ಅನುದಾನರಹಿತ ಶಾಲೆಗಳಲ್ಲಿ ವಿದ್ಯಾರ್ಥಿಗಳನ್ನು ಶಾಲೆಯಿಂದ ಹೊರಗುಳಿಯದಂತೆ ಪೂರ್ಣ ಪ್ರಮಾಣದಲ್ಲಿ ದಾಖಲಾತಿ ಮಾಡಿಕೊಳ್ಳಲು ಮತ್ತು ಹಾಜರಾತಿ ಮುಂದುವರೆಸಲು ಎಲ್ಲಾ ಅಗತ್ಯ ಕ್ರಮ ವಹಿಸಲು ಉಪನಿರ್ದೇಶಕರು(ಆಡಳಿತ) ಹಾಗೂ ಉಪನಿರ್ದೇಶಕರು(ಅಭಿವೃದ್ಧಿ) ಹಾಗೂ ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಸೂಚಿಸುತ್ತಾ ತಮ್ಮ ವ್ಯಾಪ್ತಿಯಲ್ಲಿ ಯಾವುದೇ ಅರ್ಹ ವಯಸ್ಸಿನ ಮಗು ಶಾಲೆಯಿಂದ ಹೊರಗುಳಿದಲ್ಲಿ ತಾವೇ ಜವಾಬ್ದಾರರಾಗುತ್ತೀರೆಂದು ತಿಳಿಸುವುದು ಅನಿವಾರ್ಯವಾಗುತ್ತದೆ.

Sd/-
(ಪ್ರಸನ್ನ ಕುಮಾರ್ ಎಂ.ಎಸ್)
ನಿರ್ದೇಶಕರು
ಪ್ರಾಥಮಿಕ ಶಿಕ್ಷಣ

**ಇವರಿಗೆ,**

1. ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ) ಮತ್ತು (ಅಭಿವೃದ್ಧಿ) ಸಾರ್ವಜನಿಕ ಶಿಕ್ಷಣ ಇಲಾಖೆ, ಇವರಿಗೆ ಹಿಂಬಾಲಿಸುವ ಕ್ರಮಕ್ಕಾಗಿ
2. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ, ಉಪನಿರ್ದೇಶಕರು (ಆಡಳಿತ ಮತ್ತು ಅಭಿವೃದ್ಧಿ) ರವರ ಮೂಲಕ ಮುಂದಿನ ಸೂಕ್ತ ಕ್ರಮಕ್ಕಾಗಿ
3. ರಾಜ್ಯದ ಎಲ್ಲಾ ಶಾಲೆಗಳ ಮುಖ್ಯ ಶಿಕ್ಷಕರಿಗೆ ಕ್ಷೇತ್ರ ಶಿಕ್ಷಣಾಧಿಕಾರಿಗಳ ಮೂಲಕ ಮುಂದಿನ ಕ್ರಮಕ್ಕಾಗಿ.

ಪ್ರತಿ ಗಳು

01. ರಾಜ್ಯ ಯೋಜನಾ ನಿರ್ದೇಶಕರು ಎಸ್.ಎಸ್.ಕೆ ರವರಿಗೆ ಗೌರವಪೂರ್ವಕವಾಗಿ ಸಲ್ಲಿಸಿದೆ
02. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ / ಕಲಬುರಗಿ ರವರಿಗೆ ಸೂಕ್ತ ಕ್ರಮಕ್ಕಾಗಿ
03. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ನಿರ್ದೇಶಕಕರುಗಳಿಗೆ ಮಾಹಿತಿಗಾಗಿ ಹಾಗೂ ಅಗತ್ಯ ಕ್ರಮಕ್ಕಾಗಿ
04. ಸಹ ನಿರ್ದೇಶಕರು ಮಧ್ಯಾಹ್ನ ಉಪಹಾರ ಯೋಜನೆ ಬೆಂಗಳೂರು ರವರಿಗೆ. ಮಾಹಿತಿಗಾಗಿ ಹಾಗೂ ಕ್ರಮಕ್ಕಾಗಿ
05. E-Governance for uploading
06. ಕಛೇರಿ ಪ್ರತಿ

(ಮಾನ್ಯ ಆಯುಕ್ತರ ಅನುಮೋದನೆ ಮೇರೆಗೆ)

(ಪ್ರಸನ್ನ ಕುಮಾರ್ ಎಂ.ಎಸ್)